Akashvani : Bangalore
National Bulletin In Kannada
30.11.2024 : 7.35am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು:

- ಭುವನೇಶ್ವರದ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರೀಕ್ಷಕರ ಸಮ್ಮೇಳನದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಭಾಗಿ
- ಕೇಂದ್ರ ಸರ್ಕಾರದಿಂದ ಈವರೆಗೆ ೧೪ ಲಕ್ಷ ಆಯುಷ್ಮಾನ್ ವಯ ವಂದನಾ ಕಾರ್ಡ್ ವಿತರಣೆ
- ಪ್ರಯಾಗ್ ರಾಜ್‌ನಲ್ಲಿ ಆಯೋಜಿಸಿರುವ ಮಹಾಕುಂಭ ಮೇಳ ಜಾಗತಿಕ ಐಕ್ಯತೆಯ ಸಂಕೇತ - ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೆಖಾವತ್
- ೧೯ ವರ್ಷ ವಯೋಮಿತಿಯ ಏಷ್ಯಾ ಕಪ್ ಕ್ರಿಕೆಟ್ ಪಂದ್ಯಾವಳಿ; ದುಬೈನಲ್ಲಿಂದು ಭಾರತ-ಪಾಕಿಸ್ತಾನ ಮುಖಾಮುಖಿ

******

ಪ್ರಧಾನಿ ನರೇಂದ್ರ ಮೋದಿ ಅವರು ಒಡಿಶಾಗೆ ಮೂರು ದಿನಗಳ ಪ್ರವಾಸ ಕೈಗೊಂಡಿದ್ದು, ನಿನ್ನೆ ಸಂಜೆ ಭುವನೇಶ್ವರ ತಲುಪಿದರು. ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಭುವನೇಶ್ವರದಲ್ಲಿ ಇಂದು ನಡೆಯಲಿರುವ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರೀಕ್ಷಕರ ಸಮ್ಮೇಳನದಲ್ಲಿ ಅವರು ಭಾಗವಹಿಸಲಿದ್ದಾರೆ. ಮೂರು ದಿನಗಳ ಸಮ್ಮೇಳನ ನಿನ್ನೆಯಿಂದ ಆರಂಭಗೊಂಡಿದ್ದು, ಭಯೋತ್ಪಾದನೆ ನಿಗ್ರಹ, ನಕ್ಸಲ್ ಉಗ್ರವಾದ, ಕರಾವಳಿ ಭದ್ರತೆ, ಹೊಸ ಕ್ರಿಮಿನಲ್ ಕಾನೂನುಗಳು, ಮಾದಕ ವಸ್ತುಗಳು ಸೇರಿದಂತೆ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಪ್ರಮುಖ ಅಂಶಗಳನ್ನು ಸಮ್ಮೇಳನದಲ್ಲಿ ಚರ್ಚಿಸಲಾಗುತ್ತದೆ. ವಿಶೇಷ ಸೇವೆಗಾಗಿ ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಪೊಲೀಸ್ ಪದಕಗಳನ್ನು ಸಮ್ಮೇಳನದಲ್ಲಿ ಪ್ರದಾನ ಮಾಡಲಾಗುತ್ತದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಪ್ರಧಾನಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಪಿ.ಕೆ.ಮಿಶ್ರಾ ಸೇರಿದಂತೆ ಹಲವು ಪ್ರಮುಖರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

******

ಆಯುಷ್ಮಾನ್ ಭಾರತ್ - ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಅಡಿಯಲ್ಲಿ ೭೦ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ನಾಗರಿಕರಿಗೆ ಈ ತಿಂಗಳ ೨೫ ರವರೆಗೆ ೧೪ ಲಕ್ಷ ಆಯುಷ್ಮಾನ್ ವಯ ವಂದನಾ ಕಾರ್ಡ್‌ಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿ ನಿನ್ನೆ ಲಿಖಿತ ಉತ್ತರ ನೀಡಿದ ಅವರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್ ರಾವ್ ಜಾದವ್, ಈಗ ೭೦ ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಎಲ್ಲ ಹಿರಿಯ ನಾಗರಿಕರಿಗೆ ಪ್ರತಿ ವರ್ಷ ೫ ಲಕ್ಷದ ವರೆಗೆ ಉಚಿತ ಚಿಕಿತ್ಸಾ ಸೌಲಭ್ಯಗಳನ್ನು ಈ ಯೋಜನೆಯಡಿ ನೀಡಲಾಗುತ್ತಿದೆ. ಯೋಜನೆ ಅಡಿಯಲ್ಲಿ ಸುಮಾರು ನಾಲ್ಕೂವರೆ ಕೋಟಿ ಫಲಾನುಭವಿ ಕುಟುಂಬಗಳಿದ್ದು, ಸುಮಾರು ೬ ಕೋಟಿ ಜನರನ್ನು ಈ ಯೋಜನೆ ತಲುಪಿದೆ ಎಂದು ತಿಳಿಸಿದರು.ಈ ಯೋಜನೆಯಡಿ ಈಗಾಗಲೇ ೧೩ ಸಾವಿರದ ೧೭೩ ಖಾಸಗಿ ಆಸ್ಪತ್ರೆಗಳು ಸೇರಿದಂತೆ ಒಟ್ಟು ೨೯ ಸಾವಿರದ ೮೭೦ ಆಸ್ಪತ್ರೆಗಳು ನೋಂದಾಯಿಸಿಕೊಂಡಿವೆ ಎಂದು ಮಾಹಿತಿ ನೀಡಿದರು.

******

ವಿವಿಧ ಸಚಿವಾಲಯಗಳಿಗೆ ಸಂಬಂಧಿಸಿದ ಕಾಗದ ಪತ್ರಗಳನ್ನು ರಾಜ್ಯಸಭೆಯಲ್ಲಿ ನಿನ್ನೆ ಮಂಡನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ವಕ್ಫ್ ತಿದ್ದುಪಡಿ ಮಸೂದೆಯ ಸಂಬಂಧ ರಚಿಸಲಾಗಿರುವ ಜಂಟಿ ಸಂಸದೀಯ ಸಮಿತಿಯ ಕಾರ್ಯಾವಧಿಯನ್ನು ೨೦೨೫ರ ಬಜೆಟ್ ಅಧಿವೇಶನದ ಕೊನೆಯ ದಿನದವರೆಗೆ ವಿಸ್ತರಿಸಿರುವ ಕುರಿತು ಸದನಕ್ಕೆ ಮಾಹಿತಿ ನೀಡಲಾಯಿತು. ಕೇಂದ್ರ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಎಲ್.ಮುರುಗನ್, ಸರ್ಕಾರದ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಬರುವ ಸೋಮವಾರ ಮಂಡನೆಯಾಗುವ ಮಸೂದೆಗಳ ಕುರಿತು ಮಾಹಿತಿ ನೀಡಿದರು.

ಕೈಗಾರಿಕೋದ್ಯಮಿಯೊಬ್ಬರ ವಿರುದ್ಧದ ಲಂಚ ಆರೋಪ, ಮಣಿಪುರ ಹಿಂಸಾಚಾರ, ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಹಿಂಸೆ, ಇಸ್ಕಾನ್, ಚಿನ್ಮಯ ಕೃಷ್ಣ ದಾಸ್ ಅವರ ಬಂಧನದ ಬಗ್ಗೆ ಚರ್ಚೆ ನಡೆಸುವಂತೆ ವಿರೋಧ ಪಕ್ಷಗಳ ಸದಸ್ಯರು ಗದ್ದಲ ನಡೆಸಿದ್ದರಿಂದ ಸದನದ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಯಿತು.

******

ದೇಶಾದ್ಯಂತ ನ್ಯಾಯಾಂಗದಲ್ಲಿ ೫ ಸಾವಿರದ ೬೦೦ಕ್ಕೂ ಹೆಚ್ಚು ನ್ಯಾಯಾಧೀಶರ ಹುದ್ದೆಗಳು ಖಾಲಿಯಿವೆ ಎಂದು ಕೇಂದ್ರ ಸರ್ಕಾರ ಮಾಹಿತಿ ನೀಡಿದೆ. ಲೋಕಸಭೆಯಲ್ಲಿ ನಿನ್ನೆ ಲಿಖಿತ ಉತ್ತರ ನೀಡಿದ ಕೇಂದ್ರ ಕಾನೂನು ಸಚಿವ ಅರ್ಜುನ್‌ರಾಮ್ ಮೇಘವಾಲ್, ಸುಪ್ರೀಂಕೋರ್ಟ್‌ನಲ್ಲಿ ಎರಡು, ಹೈಕೋರ್ಟ್‌ಗಳಲ್ಲಿ ೩೬೪ ಮತ್ತು ಜಿಲ್ಲಾ ಮತ್ತು ಅಧೀನ ನ್ಯಾಯಾಲಯಗಳಲ್ಲಿ ಐದು ಸಾವಿರಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇವೆ. ಕಳೆದ ಐದು ವರ್ಷಗಳಲ್ಲಿ ದೇಶದ ವಿವಿಧ ಹೈಕೋರ್ಟ್‌ಗಳಲ್ಲಿ ಸುಮಾರು ೫೦೦ ನ್ಯಾಯಾಧೀಶರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದರು. ಅಸ್ತಿತ್ವದಲ್ಲಿರುವ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ಎಲ್ಲ ಪ್ರಯತ್ನಗಳನ್ನು ಕೈಗೊಳ್ಳಲಾಗುವುದು ಎಂದರು. ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಐದು ವರ್ಷಗಳಿಗೂ ಹೆಚ್ಚು ಕಾಲದಿಂದ ೧೯ ಸಾವಿರದ ೫೦೦ ಕ್ಕೂ ಹೆಚ್ಚು ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿವೆ. ಇನ್ನು ವಿವಿಧ ಹೈಕೋರ್ಟ್‌ಗಳಲ್ಲಿ ಐದು ವರ್ಷಗಳಿಗೂ ಹೆಚ್ಚು ಕಾಲದಿಂದ ೨೭ ಲಕ್ಷಕ್ಕೂ ಹೆಚ್ಚು ಪ್ರಕರಣಗಳು ಬಾಕಿ ಉಳಿದಿವೆ ಎಂದು ಮಾಹಿತಿ ನೀಡಿದರು.

******

ಸಂಸತ್ತಿನ ಚಳಿಗಾಲದ ಅಧಿವೇಶನದ ನಾಲ್ಕನೇ ದಿನವಾದ ನಿನ್ನೆ ಉಭಯ ಸದನಗಳಲ್ಲಿ ಪ್ರತಿಪಕ್ಷಗಳ ಗದ್ದಲ-ಕೋಲಾಹಲದಿಂದ ಕಲಾಪಕ್ಕೆ ಅಡ್ಡಿ ಉಂಟಾಯಿತು. ಕೈಗಾರಿಕೋದ್ಯಮಿಯೊಬ್ಬರ ವಿರುದ್ಧ ಲಂಚ ಆರೋಪ ಸೇರಿದಂತೆ ಹಲವು ವಿಷಯ ಪ್ರಸ್ತಾಪಿಸಿದ ಪ್ರತಿಪಕ್ಷಗಳು ಗದ್ದಲ ಸೃಷ್ಟಿಸಿದ್ದರಿಂದ ರಾಜ್ಯಸಭೆ ಹಾಗೂ ಲೋಕಸಭೆಯ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಯಿತು.

******

ಮುಂದಿನ ವರ್ಷದ ಆರಂಭದಲ್ಲಿ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಆಯೋಜಿಸಿರುವ ಮಹಾಕುಂಭ ಮೇಳ ಒಂದು ಜಾಗತಿಕ ಐಕ್ಯತೆಯ ಸಂಕೇತ ಎಂದು ಕೇಂದ್ರ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಹೇಳಿದ್ದಾರೆ. ನಿನ್ನೆ ಮಹಾಕುಂಭ ೨೦೨೫ರ ಪೂರ್ವಭಾವಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಮೇಳ, ಸಂಸ್ಕೃತಿ, ಕರಕುಶಲ ಮತ್ತು ಕಲೆಯ ಜಾಗತಿಕ ವಿನಿಮಯಕ್ಕೆ ಅವಕಾಶ ಕಲ್ಪಿಸುತ್ತದೆ. ವಿಶ್ವಾದ್ಯಂತ ವಿವಿಧೆಡೆಯಿಂದ ಆಗಮಿಸುವ ಎಲ್ಲರಿಗೂ ಅತ್ಯುತ್ತಮ ಸಾರಿಗೆ, ವಸತಿ ಸೇರಿದಂತೆ ಇನ್ನಿತರ ವ್ಯವಸ್ಥೆಗಳನ್ನು ಕಲ್ಪಿಸಲು ಸರ್ಕಾರ ಬದ್ಧವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಭೂತಾನ್, ನೇಪಾಳ, ಇಂಡೋನೇಷ್ಯಾ ಶ್ರೀಲಂಕಾ, ಅಮೆರಿಕ, ಮಲೇಷಿಯಾ, ಮ್ಯಾನ್ಮಾರ್ ಸೇರಿದಂತೆ ಹಲವು ದೇಶಗಳ ರಾಯಭಾರಿಗಳು ಮತ್ತು ಹೈಕಮಿಷನರ್‌ಗಳು ಭಾಗವಹಿಸಿದ್ದರು. ೧೩ ಜನವರಿ ೨೦೨೫ಕ್ಕೆ ಆರಂಭಗೊಳ್ಳಲಿರುವ ಮಹಾಕುಂಭ, ಫೆಬ್ರವರಿ ೨೬ ವರೆಗೆ ನಡೆಯಲಿದೆ.

******

ಫಿಜಿಯ ಉಪಪ್ರಧಾನಿ ಮನೋವಾ ಕಾಮಿಕಾಮಿಕಾ ಅವರು ದೆಹಲಿಯಲ್ಲಿ ನಿನ್ನೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತದಲ್ಲಿನ ಸಹಕಾರಿ ಸಂಸ್ಥೆಗಳು ಮತ್ತು ಇತರೆ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಮನೋವಾ ಅವರ ಸಕಾರಾತ್ಮಕ ಅನಿಸಿಕೆಗಳನ್ನು ಆಲಿಸಿ ಡಾ. ಜೈಶಂಕರ್ ಹರ್ಷ ವ್ಯಕ್ತಪಡಿಸಿದರು. ಸಾವಯವ ಕೃಷಿ, ತಂತ್ರಜ್ಞಾನ ಮತ್ತು ಡಿಜಿಟಲ್ ಉಪಕರಣಗಳ ಸಂಭಾವ್ಯ ಸಾಮರ್ಥ್ಯದ ಕುರಿತು ಉಭಯ ನಾಯಕರು ಚರ್ಚಿಸಿದರು. ದ್ವಿಪಕ್ಷೀಯ ಸಂಬಂಧಗಳನ್ನು ಬಲಗೊಳಿಸಲು ಫಿಜಿಯ ಉಪಪ್ರಧಾನಿ ಬೆಂಬಲ ಸೂಚಿಸಿರುವುದನ್ನು ತಾನು ಗೌರವಿಸುವುದಾಗಿ ಡಾ. ಜೈಶಂಕರ್ ಹೇಳಿದರು.

******

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಒಂದು ದಿನದ ಪ್ರವಾಸಕ್ಕಾಗಿ ಇಂದು ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಸೂರತ್‌ನ ಕಿಮ್‌ನಲ್ಲಿರುವ ಬುಲೆಟ್ ಟ್ರೈನ್ ಟ್ರ್ಯಾಕ್ ಸ್ಲ್ಯಾಬ್ ನಿರ್ಮಾಣ ಘಟಕಕ್ಕೆ ಹಾಗೂ ವಡೋದರಾದ ಪ್ಲಾಸರ್ ಇಂಡಿಯಾ ಕಾರ್ಖಾನೆಗೂ ಭೇಟಿ ನೀಡಲಿದ್ದಾರೆ.

ಬಳಿಕ ಅವರು, ವಡೋದರಾದಲ್ಲಿರುವ 'ಗತಿಶಕ್ತಿ' ವಿಶ್ವವಿದ್ಯಾಲಯದ ಎರಡನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದು, ಈ ವೇಳೆ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಒಟ್ಟು ೨೩೯ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

******

ಸಾರ್ವತ್ರಿಕ ರೋಗನಿರೋಧಕ ಕಾರ್ಯಕ್ರಮ - ಯುಐಪಿ ಅಡಿಯಲ್ಲಿ ಸುಮಾರು ೭.೪೩ ಕೋಟಿ ಫಲಾನುಭವಿಗಳು ನೋಂದಾಯಿಸಿ ಕೊಂಡಿದ್ದಾರೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಈ ಕಾರ್ಯಕ್ರಮವು ಗರ್ಭಿಣಿಯರು ಮತ್ತು ಮಕ್ಕಳಿಗೆ ತಡೆಗಟ್ಟಬಹುದಾದ ೧೨ ರೋಗಗಳಿಗೆ ಲಸಿಕೆಗಳನ್ನು ಒದಗಿಸುತ್ತದೆ. ನಿನ್ನೆ ಲೋಕಸಭೆಯಲ್ಲಿ ಲಿಖಿತ ಉತ್ತರದಲ್ಲಿ ಈ ಕುರಿತು ಮಾಹಿತಿ ನೀಡಿದ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್, ೧.೨೮ ಕೋಟಿ ವ್ಯಾಕ್ಸಿನೇಷನ್ ಸೆಷನ್‌ಗಳನ್ನು ನಡೆಸಲಾಗಿದೆ ಮತ್ತು ಪೋರ್ಟಲ್‌ನಲ್ಲಿ ದಾಖಲಾಗಿರುವಂತೆ ಸುಮಾರು ೨೭.೭೭ ಕೋಟಿ ಲಸಿಕೆ ಡೋಸ್‌ಗಳನ್ನು ನೀಡಲಾಗಿದೆ ಎಂದು ಹೇಳಿದ್ದಾರೆ. ಲಸಿಕಾ ಸೇವೆಗಳ ಕುರಿತು ಜಾಗೃತಿ ಮೂಡಿಸಲು U-WIಓ ಡಿಜಿಟಲ್ ವೇದಿಕೆಯನ್ನು ಪರಿಚಯಿಸಲಾಗಿದೆ. ಈ ಅಪ್ಲಿಕೇಶನ್ ಗೂಗಲ್ ಪ್ಲೇ ಸ್ಟೋರ್‌ನಲ್ಲಿ ಡೌನ್‌ಲೋಡ್ ಮಾಡಲು ಲಭ್ಯವಿದೆ. ಯುಐಪಿ ಯೋಜನೆಯಡಿ ವಾರ್ಷಿಕ ಸುಮಾರು ೨.೯ ಕೋಟಿ ಗರ್ಭಿಣಿಯರು ಮತ್ತು ೨.೮ ಕೋಟಿ ಶಿಶುಗಳಿಗೆ ತಲುಪುವ ಗುರಿ ಹೊಂದಲಾಗಿದೆ ಎಂದರು.

******

೧೯ವರ್ಷ ವಯೋಮಿತಿಯ ಏಷ್ಯಾ ಕಪ್ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಮೊದಲ ಪಂದ್ಯದಲ್ಲಿಂದು ಭಾರತ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದೆ. ದುಬೈನಲ್ಲಿಂದು ಭಾರತೀಯ ಕಾಲಮಾನ ಬೆಳಗ್ಗೆ ೧೦.೩೦ಕ್ಕೆ ಪಂದ್ಯ ಆರಂಭವಾಗಲಿದ್ದು, ಮೊಹಮ್ಮದ್ ಅಮಾನ್, ಭಾರತ ತಂಡದ ನೇತೃತ್ವ ವಹಿಸಲಿದ್ದಾರೆ.

ಶಾರ್ಜಾದಲ್ಲಿ ನಡೆಯಲಿರುವ ಎ ಗುಂಪಿನ ದಿನದ ಎರಡನೇ ಪಂದ್ಯದಲ್ಲಿ ಯುಎಇ ಹಾಗೂ ಜಪಾನ್ ತಂಡಗಳು ಮುಖಾಮುಖಿಯಾಗಲಿವೆ. ಭಾರತೀಯ ಕಾಲಮಾನ ಬೆಳಗ್ಗೆ ೧೦.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಪಂದ್ಯಾವಳಿಯ ಎ ಗುಂಪಿನಲ್ಲಿ ಭಾರತ, ಪಾಕಿಸ್ತಾನ, ಯುಎಇ ಹಾಗೂ ಜಪಾನ್ ತಂಡಗಳಿವೆ.

******

ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ ಮಂಡಳಿಯು ನಿನ್ನೆ ಸಂಕ್ಷಿಪ್ತ ವರ್ಚುವಲ್ ಸಭೆಯನ್ನು ನಡೆಸಿತು. ೨೦೨೫ರ ಚಾಂಪಿಯನ್ಸ್ ಟ್ರೋಫಿಯ ಆವೃತ್ತಿಯಲ್ಲಿ ಐಸಿಸಿ ಮಂಡಳಿಯ ಸದಸ್ಯರು ಹಾಗೂ ಭಾರತೀಯ ಕ್ರಿಕೆಟ್ ಮಂಡಳಿ ಬಿಸಿಸಿಐ ಒಮ್ಮತದ ನಿರ್ಧಾರಕ್ಕೆ ಬಂದಿದ್ದು, ಭದ್ರತಾ ಕಾರಣಗಳಿಂದಾಗಿ ಪಾಕಿಸ್ತಾನಕ್ಕೆ ಪ್ರಯಾಣಿಸಲು ನಿರಾಕರಿಸಿದೆ. ಬಿಸಿಸಿಐ ಹೈಬ್ರಿಡ್ ಮಾದರಿ ಆತಿಥ್ಯವನ್ನು ಸೂಚಿಸಿದ್ದು, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಇದನ್ನು ತಿರಸ್ಕರಿಸಿದೆ. ಐಸಿಸಿ ಮಂಡಳಿಯು ಮತ್ತೊಮ್ಮೆ ಈ ಕುರಿತು ಸಭೆ ನಡೆಸಲಿದೆ. ಏಕದಿನ ಪಂದ್ಯಾವಳಿ ಮುಂದಿನ ವರ್ಷದ ಫೆಬ್ರವರಿ-ಮಾರ್ಚ್‌ನಲ್ಲಿ ಆಯೋಜಿಸಲಾಗುತ್ತಿದೆ. ಈ ಮಧ್ಯೆ, ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ಮಾತನಾಡಿ, ಭಾರತೀಯ ಆಟಗಾರರ ಸುರಕ್ಷತೆ ಪ್ರಮುಖ ಆದ್ಯತೆಯಾಗಿದೆ, ಐಸಿಸಿ ಮತ್ತು ಪಾಕಿಸ್ತಾನ ಕ್ರಿಕೆಟ್ ಮಂಡಳಿಯೊಂದಿಗೆ ಚರ್ಚೆ ಮುಂದುವರಿದಿದ್ದು, ಈ ಕುರಿತ ಭಾರತ ಸರ್ಕಾರದ ಸೂಚನೆಯನ್ನು ಬಿಸಿಸಿಐ ಪಾಲಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

******

ಉತ್ತರ ಪ್ರದೇಶದ ಲಕ್ನೋದ ಬಾಬು ಬನಾರಸಿ ದಾಸ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸಯ್ಯದ್ ಮೋದಿ ಅಂತಾರಾಷ್ಟ್ರೀಯ ಸೂಪರ್ ೩೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಶಟ್ಲರ್‌ಗಳಾದ ಪಿ.ವಿ.ಸಿಂಧು ಮತ್ತು ಲಕ್ಷ್ಯ ಸೇನ್ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದ ಕ್ವಾಟರ್‌ಫೈನಲ್ಸ್ ಪಂದ್ಯದಲ್ಲಿ ಮೀರಾಬಾ ಲುವಾಂಗ್ ಮೈಸ್ನಮ್ ಅವರನ್ನು ೨೧-೮, ೨೧-೧೯ ಸೆಟ್‌ಗಳಿಂದ ಲಕ್ಷ್ಯ ಸೇನ್ ಪರಾಭವಗೊಳಿಸಿದರು.

ಇನ್ನೊಂದೆಡೆ, ಪುರುಷರ ಸಿಂಗಲ್ಸ್ ವಿಭಾಗದ ಕ್ವಾಟರ್‌ಫೈನಲ್ಸ್ ಪಂದ್ಯದಲ್ಲಿ ಚೀನಾದ ದೈ ವಾಂಗ್ ಅವರನ್ನು ೨೧-೧೫, ೨೧-೧೭ ಸೆಟ್‌ಗಳಿಂದ ಸೋಲಿಸಿ, ಪಿ.ವಿ.ಸಿಂಧು ಸೆಮಿಫೈನಲ್ಸ್ ಪ್ರವೇಶಿಸಿದರು.

******